**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು**

Recruitment Section ( **ನೇಮಕ ಶಾಖೆ** )

**ಪತ್ರಿಕಾ ಪ್ರಕಟಣೆ**

ವಿಷಯ : ಕರಾರಸಾ ನಿಗಮದಲ್ಲಿ ನೇಮಕಾತಿ ಪ್ರಕ್ರಿಯೆಗಳ ಮಾಹಿತಿ.

*****

ಕರಾರಸಾ ನಿಗಮದಲ್ಲಿ ಜಾಹೀರಾತು ಸಂ.1/2018 & 2/2018 ರನ್ವಯ 726 ತಾಂತ್ರಿಕ ಸಹಾಯಕ ಮತ್ತು 200 ಕರಾಸಾ ಪೇದೆ ಹುದ್ದೆಗಳಿಗೆ ಹಾಗೂ ಜಾಹೀರಾತು ಸಂ.1/2020 ರನ್ವಯ 3745 ಚಾಲನಾ ಸಿಬ್ಬಂದಿ ನೇರ ನೇಮಕಾತಿಗಾಗಿ ಅಧಿಸೂಚನೆಗಳನ್ನು ಹೊರಡಿಸಲಾಗಿತ್ತು. ನೇಮಕಾತಿ ಪ್ರಕ್ರಿಯೆಯನ್ನು ಕೋವಿಡ್-19 ರ ಕಾರಣ ತಡೆಹಿಡಿಯಲಾಗಿರುತ್ತದೆ.

ಪ್ರಸ್ತುತ ಕೋವಿಡ್-19 ಪರಿಸ್ಥಿತಿ ಸಹಜ ಸ್ಥಿತಿಗೆ ಬರುತ್ತಿರುವ ಹಿನ್ನಲೆಯಲ್ಲಿ ಮೇಲ್ಕಂಡ ನೇರ ನೇಮಕಾತಿ ಪ್ರಕ್ರಿಯೆಗಳಿಗೆ ಚಾಲನೆ ನೀಡಲು ದಿನಾಂಕ:15-09-2021 ರಂದು ಸರ್ಕಾರದ ಅನುಮತಿ ಕೋರಲಾಗಿರುತ್ತದೆ. ಈ ಕುರಿತು ಅನುಮತಿ ಬಂದ ಕೂಡಲೇ ಮೇಲ್ಕಂಡ ನೇಮಕಾತಿ ಪ್ರಕ್ರಿಯೆಗಳಿಗೆ ಚಾಲನೆ ನೀಡಲಾಗುವುದು ಹಾಗೂ ಈ ಕುರಿತು ಪ್ರಚಲಿತ ದಿನಪತ್ರಿಕೆಗಳಲ್ಲಿ ಮತ್ತು ನಿಗಮದ ಅಧಿಕೃತ ವೆಬ್-ಸೈಟ್ ಆದ www.ksrtcjobs.karnataka.gov.in ರಲ್ಲಿ ಮಾಹಿತಿ ನೀಡಲಾಗುವುದು.

ಸಹಿ/-

**ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,**

ವ್ಯವಸ್ಥಾಪಕ ನಿರ್ದೇಶಕರು.

# ಕೆಎಸ್ಸಾರ್ಟಿಸಿ 4600 ಹುದ್ದೆ ಭರ್ತಿಗೆ ಅನುಮತಿ ಕೋರಿ ಸರ್ಕಾರಕ್ಕೆ ಮನವಿ

**ಬೆಂಗಳೂರು:** ಕೆಎಸ್‌ಆರ್‌ಟಿಸಿಯಲ್ಲಿ ಖಾಲಿಯಿರುವ ವಿವಿಧ ಹಂತದ ಸುಮಾರು 4,600ಕ್ಕೂ ಹುದ್ದೆಗಳ ಭರ್ತಿಗೆ ಮರುಚಾಲನೆಗೆ ಸರ್ಕಾರದ ಅನುಮತಿ ಕೋರಿದ್ದು, ಅನುಮತಿ ದೊರೆತ ನಂತರ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಯೋಗಿ ಕಳಸದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಂಸ್ಥೆಯ ಘಟಕಗಳಲ್ಲಿ ಖಾಲಿಯಿದ್ದ 726 ತಾಂತ್ರಿಕ ಸಹಾಯಕರು, 200 ಜಾಗೃತ ದಳ ಹಾಗೂ 3,745 ಚಾಲನಾ ಸಿಬ್ಬಂದಿ ನೇರ ನೇಮಕಾತಿಗೆ ಈ ಹಿಂದೆ ಅಧಿಸೂಚನೆ ಹೊರಡಿಸಲಾಗಿತ್ತು. ಆದರೆ, ಕೊರೋನಾ ಕಾರಣದಿಂದ ಪ್ರಕ್ರಿಯೆಗೆ ತಡೆ ನೀಡಲಾಗಿತ್ತು. ಇದೀಗ ಸೋಂಕು ಕಡಿಮೆಯಾಗಿದ್ದು, ಜನ ಜೀವನ ಸಹಜ ಸ್ಥಿತಿಗೆ ತಲುಪಿದೆ. ಆದ ಕಾರಣದಿಂದ ನೇಮಕಾತಿ ಪ್ರಕ್ರಿಯೆಗಳಿಗೆ ಮರು ಚಾಲನೆ ನೀಡುತ್ತಿದ್ದು, ಈ ಸಂಬಂಧ ಸರ್ಕಾರ ಅನುಮತಿ ಕೋರಲಾಗಿದೆ. ಅನುಮತಿ ದೊರೆತ ತಕ್ಷಣ ಪ್ರಕ್ರಿಯೆಗಳು ಪ್ರಾರಂಭವಾಗಲಿದೆ. ಹೆಚ್ಚಿನ ಮಾಹಿತಿಗೆ **www.ksrtcjobs.karnataka.gov.in**ಗೆ ಸಂಪರ್ಕಿಸಬಹುದಾಗಿದೆ.